# ಅಂತರ್ ಕಾಲೇಜು ಮಹಿಳಾ ಕಬಡ್ಡಿ ಚಾಂಪಿಯನ್‌ಶಿಪ್

# ಎಸ್‌ಡಿಎಂ ಚಾಂಪಿಯನ್, ಆಳ್ವಾಸ್ ದ್ವಿತೀಯ




ಕಾರ್ಕಳ, ಸೆ. 26: ಎಂಪಿಎಂ ಕಾಲೇಜಿನಲ್ಲಿ ನಡೆದ ಮಂಗಳೂರು ವಿಶ್ವವಿದ್ಯಾನಿಲಯ ಮಟ್ಟದ ಅಂತರ್ ಕಾಲೇಜು ಮಹಿಳಾ ಕಬಡ್ಡಿ ಚಾಂಪಿಯನ್‌ಶಿಪ್ ಪಂದ್ಯದಲ್ಲಿ ಉಜಿರೆ ಎಸ್‌ಡಿಎಂ ಕಾಲೇಜು ತಂಡ ಚಾಂಪಿಯನ್‌ಶಿಪ್ ಪ್ರಶಸ್ತಿ ಪಡೆದಿದೆ. ಮೂಡುಬಿದಿರೆಯ ಆಳ್ವಾಸ್ ಕಾಲೇಜು ತಂಡ ದ್ವಿತೀಯ ಸ್ಥಾನ ತನ್ನದಾಗಿಸಿಕೊಂಡಿತು.

ಒಟ್ಟು 34 ತಂಡಗಳು ಭಾಗವಹಿಸಿದ್ದು, ಕಬಡ್ಡಿ ನೋಡಲು ಜನ ಕಿಕ್ಕಿರಿದು ನೆರೆದಿದ್ದರು. ಆಳ್ವಾಸ್ ಕಾಲೇಜಿನ ಆತ್ಮೀಯ ಅತ್ಯುತ್ತಮ ಡಿಫೆಂಡರ್ ಪ್ರಶಸ್ತಿ ಪಡೆದರೆ, ಎಸ್‌ಡಿಎಂ ಕಾಲೇಜಿನ ಮಾನಸ ಅತ್ಯುತ್ತಮ ರೈಡರ್ ಆಗಿ ಹೊರಹೊಮ್ಮಿದ್ದರು. ಪಂದ್ಯಾವಳಿಯ ಅತ್ಯುತ್ತಮ ಆಲ್‌ರೌಂಡರ್ ಪ್ರಶಸ್ತಿ ಎಸ್‌ಡಿಎಂ ಕಾಲೇಜಿನ ಕವಿತಾ ಪಾಲಾಯಿತು.

ಪ್ರಶಸ್ತಿ ವಿತರಣ ಸಮಾರಂಭದಲ್ಲಿ ಅಂತಾರಾಷ್ಟ್ರೀಯ ಕ್ರೀಡಾಪಟು ಅಪ್ಸರಾ ಆರ್. ಕಟೀಲು, ಕಾಲೇಜಿನ ಪ್ರಾಂಶುಪಾಲ ಶ್ರೀವರ್ಮ ಅಜ್ರಿ ಎಂ., ಮಂಗಳೂರು ವಿವಿ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ। ಕಿಶೋರ್ ಕುಮಾರ್ ಸಿ.ಕೆ., ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಪ್ರಭಾಕರ ಬಂಗೇರ, ಕಾರ್ಕಳ ಎಪಿಎಂಸಿ ಮಾಜಿ ಅಧ್ಯಕ್ಷ ಅತ್ತೂರು ಬಾಲಕೃಷ್ಣ ಹೆಗ್ಡೆ, ಪುರಸಭಾ ಸದಸ್ಯೆ ಮಮತಾ ಪೂಜಾರಿ, ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ಕೃಷ್ಣಮೂರ್ತಿ ವೈದ್ಯ ಉಪಸ್ಥಿತರಿದ್ದರು.

ಪ್ರಾಧ್ಯಾಪಕ ನವೀನ್ ಸ್ವಾಗತಿಸಿ, ಕಾಲೇಜಿನ ಗ್ರಂಥಪಾಲಕ ವೆಂಕಟೇಶ್ ಕಾರ್ಯಕ್ರಮ ನಿರೂಪಿಸಿದರು. ಸಹ ಪ್ರಾಧ್ಯಾಪಕ ಯೋಗೇಶ್ ಡಿ.ಎಚ್. ವಂದಿಸಿದರು.

ಉದಯವಾಣಿ 27/09/19.